ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
ಅಂತರ್ಜಾಲ : www.kptcl.com

ಇ-ಮೇಲ್ ವಿಳಾಸ :director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.

ಸಂಖ್ಯೆ: ಕವಿಪ್ರನಿನಿ/ಹಿಸ7/90533/2018-19 ದಿನಾಂಕ :20 NOV 2019

## ಸುತ್ತೋಲೆ

ವಿಷಯ: ಪ್ರಧಾನ ಮಂತ್ರಿ ಪ್ರೋತ್ಸಾಹ ರೋಜಗಾರ ಯೋಜನೆಯಡಿ ಪಾವತಿಯಾದ ಇ.ಪಿ.ಎಫ್ ಮೊತ್ತವನ್ನು ಗುತ್ತಿಗೆದಾರರಿಂದ ವಸೂಲು ಮಾಡುವ ಬಗ್ಗೆ.

ಉಲ್ಲೇಖ: ಈ ಕಚೇರಿ ಪತ್ರ ಸಂಖ್ಯೆ: ಕವಿಪ್ರನಿನಿ/ಹಿಸ7/ 90533/2018-19, ದಿನಾಂಕ: 09.05.2019

********

ಕವಿಪ್ರನಿನಿಯಲ್ಲಿ ವಿವಿಧ ಸೇವೆಗಳನ್ನು ಕೆ.ಟಿ.ಪಿ.ಪಿ ಕಾಯ್ದೆಯನ್ವಯ ಟೆಂಡರ್ ಪ್ರಕ್ರಿಯೆಗೊಳಪಡಿಸಿ ಗುತ್ತಿಗೆದಾರರ ಮೂಲಕ ಪಡೆಯಲಾಗುತ್ತಿದ್ದು, ಇಂತಹ ಗುತ್ತಿದಾರರ ಅಡಿಯಲ್ಲಿ ಬರುವ ಹೊರಗುತ್ತಿಗೆ ಕೆಲಸಗಾರರಿಗೆ ಕನಿಷ್ಠ ವೇತನ ಕಾಯ್ದೆಯನ್ವಯ ಪಾವತಿಸಬೇಕಾದ ಕನಿಷ್ಠ ವೇತನ, ಇದರೊಂದಿಗೆ ಇ.ಪಿ.ಎಫ್ ಹಾಗೂ ಇ.ಎಸ್.ಐ ಸೇವೆಗಳನ್ನು ಕಡ್ಡಾಯವಾಗಿ ಒದಗಿಸಲಾಗುತ್ತಿರುತ್ತದೆ.

ಕೇಂದ್ರ ಸರ್ಕಾರವು ಹೊಸದಾಗಿ ಗೊತ್ತುಪಡಿಸಿಕೊಳ್ಳುವ ಕೆಲಸಗಾರರಿಗೆ ಪ್ರಧಾನ ಮಂತ್ರಿ ಪ್ರೋತ್ಸಾಹ ರೋಜಗಾರ ಯೋಜನೆಯ ಅಡಿಯಲ್ಲಿ 3 ವರ್ಷಗಳ ಅವಧಿಗೆ ಮಾಲೀಕರ ಪಾಲಿನ (ಉದ್ಯೋಗದಾತರ) ವಂತಿಗೆಯನ್ನು ಪಾವತಿಸಲು ರಿಯಾಯಿತಿಯನ್ನು ನೀಡಿ, ಸದರಿ ಮೊತ್ತವನ್ನು ಕೇಂದ್ರ ಸರ್ಕಾರವು ಭರಿಸುತ್ತದೆ. ಇಂತಹ ಯೋಜನೆಯಡಿಯಲ್ಲಿ ಕೆಲವು ಗುತ್ತಿಗೆದಾರರು ನೊಂದಾಯಿಸಿಕೊಂಡು ಮಾಲೀಕರ ಪಾಲಿನ (ಉದ್ಯೋಗದಾತರ) ವಂತಿಗೆಯಲ್ಲಿ ರಿಯಾಯಿತಿ ಪಡೆದಿರುತ್ತಾರೆ. ಅಲ್ಲದೇ ನಿಗಮದ ವತಿಯಿಂದಲೂ ಕೂಡ ಉದ್ಯೋಗದಾತರ ವಂತಿಗೆಯನ್ನು ಪಡೆದಿರುತ್ತಾರೆ. ಇದರಿಂದ ಗುತ್ತಿಗೆದಾರರಿಗೆ ಉದ್ಯೋಗದಾತರ ವಂತಿಗೆಯು ಪಾವತಿಯಲ್ಲಿ ಹೆಚ್ಚಿನ ಪಾವತಿಯಾದಂತೆ(Double claim) ಆಗಿರುತ್ತದೆ.

ಆದ್ದರಿಂದ ಪ್ರಧಾನ ಮಂತ್ರಿ ಪ್ರೋತ್ಸಾಹ ರೋಜಗಾರ ಯೋಜನೆಯು ಜಾರಿಗೆ ಬಂದ ದಿನಾಂಕದಿಂದ ಇಲ್ಲಿಯವರೆಗಿನ ಗುತ್ತಿಗೆದಾರರ ಬಿಲ್‌ಗಳ ಜೊತೆ ಸಲ್ಲಿಸಲಾದ ಇ.ಪಿ.ಎಫ್ ಚಲನ್‌ಗಳನ್ನು ಪರಿಶೀಲಿಸಿ ಅದರಲ್ಲಿ ಪ್ರಧಾನ ಮಂತ್ರಿ ಪ್ರೋತ್ಸಾಹ ರೋಜಗಾರ ಯೋಜನೆಯ ಅಡಿಯಲ್ಲಿ ನೊಂದಾಯಿಸಿಕೊಂಡು ಉದ್ಯೋಗದಾತರ ವಂತಿಗೆಯಿಂದ ರಿಯಾಯಿತಿ ಪಡೆದಿದ್ದಲ್ಲಿ, ಅಂತಹ ರಿಯಾಯಿತಿ ಮೊತ್ತವನ್ನು ಗುತ್ತಿಗೆದಾರರಿಂದ ವಸೂಲಿ ಮಾಡಲು ಆದೇಶಿಸಲಾಗಿದೆ.

-2-

ಮುಂದುವರೆದು ಇನ್ನು ಮುಂದೆ ಬಿಲ್‌ಗಳನ್ನು ಪಾಸ್ ಮಾಡುವಾಗ ಗುತ್ತಿಗೆದಾರರು ಪ್ರಧಾನ ಮಂತ್ರಿ ಪ್ರೋತ್ಸಾಹ ರೋಜಗಾರ ಯೋಜನೆಯ ಅಡಿಯಲ್ಲಿ ರಿಯಾಯಿತಿ ಪಡೆದಿರುವುದಕ್ಕೆ/ಪಡೆಯದಿರುವುದಕ್ಕೆ ದೃಢೀಕರಣವನ್ನು ಕಡ್ಡಾಯವಾಗಿ ಪಡೆಯಲು ತಿಳಿಸಲಾಗಿದೆ.

19/11/19

ನಿರ್ದೇಶಕರು(ಆಡಳಿತ ಮತ್ತು ಮಾ.ಸಂ),
ಕವಿಪ್ರನಿನಿ.

<u>ಪ್ರತಿಯನ್ನು ಮಾಹಿತಿಗಾಗಿ:-</u>

1. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ.
2. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.
3. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ, ನಿಗಮ ಕಾರ್ಯಾಲಯ, ಬೆಂಗಳೂರು.
4. ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ, ನಿಗಮ ಕಾರ್ಯಾಲಯ, ಬೆಂಗಳೂರು.

<u>ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ</u>

1. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಪ್ರಸರಣ (ಕಾ ಮತ್ತು ನಿ)ವೃತ್ತ, ಕವಿಪ್ರನಿನಿ.
2. ಎಲ್ಲಾ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
3. ಎಲ್ಲಾ ಉಪಲೆಕ್ಕನಿಯಂತ್ರಣಾಧಿಕಾರಿ, ಪ್ರಸರಣ (ಕಾ ಮತ್ತು ನಿ)ವೃತ್ತ/ಆಂ.ಪ, ಕವಿಪ್ರನಿನಿ.
4. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿಗಳು/ಲೆಕ್ಕಧಿಕಾರಿಗಳು(ಆಂ.ಪ), ಬೃಹತ್ ಕಾಮಗಾರಿ ವಿಭಾಗ/ಟಿ.ಎಲ್ ಅಂಡ್ ಎಸ್.ಎಸ್ ವಿಭಾಗ, ಕವಿಪ್ರನಿನಿ.

<u>ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-</u>

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು ಕವಿಪ್ರನಿನಿ ನೌಕರರ ಸಂಘ (ನೋಂದಣಿ ಸಂಖ್ಯೆ:659), ಬೆಂಗಳೂರು ಮತ್ತು ನಿರ್ದೇಶಕರು ಕವಿಪ್ರನಿನಿ ಮತ್ತು ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು ಮತ್ತು ನಿರ್ದೇಶಕರು ಕವಿಪ್ರನಿನಿ ಮತ್ತು ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಧಿಕಾರಿಗಳ ಸಂಘ, ಬೆಂಗಳೂರು.